ವಿತ್ತೀಯ ಕಾರ್ಯಕಲಾಪ

ಶ್ರೀ ಎಂ. ಪಿ. ಪ್ರಕಾಶ್ (ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರು) : ಮಾನ್ಯ ಉಪಾಧ್ಯಕ್ಷರೆ, "1995-96ನೇ ಸಾಲಿಗೆ ಸಂಬಂಧಿಸಿದ ಪೂರಕ ಅಂದಾಜುಗಳು (ಅಂತಿಮ ಕಂತು) ಬಗ್ಗೆ ಪ್ರಸ್ತಾವನೆಯನ್ನು ಮಾನ್ಯ ಹಣಕಾಸಿನ ಸಚಿವರ ಪರವಾಗಿ ತಮ್ಮ ಅನುಮತಿ ಪಡೆದು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಪ್ರಸ್ತಾವ ಮಂಡಿಸಲಾಯಿತು

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ :

"1995-96ನೇ ಸಾಲಿಗೆ ಸಂಬಂಧಿಸಿದ ಪೂರಕ ಅಂದಾಜುಗಳು (ಅಂತಿಮ ಕಂತು)" ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಶಾಸನ ರಚನಾ ಕಾರ್ಯಕಲಾಪಗಳು

(1) ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ 1996 ಪರ್ಯಾಲೋಚನಾ ಪ್ರಸ್ತಾಪ

+ ಶ್ರೀ ಎಂ. ಪಿ. ಪ್ರಕಾಶ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೆ,

1996ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನ್ನು ಮಂಡಿಸಲಾಯಿತು.

ಶ್ರೀ ಎಂ. ಪಿ. ಪ್ರಕಾಶ್ : ಮಾನ್ಯ ಉಪಾಧ್ಯಕ್ಷರೆ, ಈ ವಿಧೇಯಕವನ್ನು ಅಧ್ಯಾದೇಶದ ಬದಲು ಮಂಡಿಸುತ್ತಿದ್ದೇನೆ. ಕರ್ನಾಟಕ ಪಂಚಾಯತ್‌ರಾಜ್ ಕಾನೂನಿನ 156 ಮತ್ತು 157ನೇ ಪ್ರಕರಣದಲ್ಲಿ ಈ ಅಧ್ಯಕ್ಷರ ಕೈಕೆಳಗೆ ಕೆಲಸಮಾಡುವಂಥ ಕಾರ್ಯನಿರ್ವಾಹಕರಾಗಲಿ ಅಥವಾ ಜೇರ ಅಧಿಕಾರಿಗಳು ಅವರ ನಿಯಂತ್ರಣ ಹಾಗೂ ಮೇಲ್ವಿಚಾರಣೆಗೆ ಒಳಪಟ್ಟು ಕೆಲಸ ಮಾಡುವುದು ಇಂದು, ಅದೇರೀತಿ ಕಾರ್ಯನಿರ್ವಾಹಕ ಮುಖ್ಯಸ್ಥರ ಸ್ಥಾನವನ್ನು ಈಗಾಗಲೇ ನಾವು ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ಕೊಡುವುದಕ್ಕಾಗಿ ಇದೇ ಸಭೆಯ ಅಭಿಮತವಾಗಿದ್ದುದರಿಂದ ಕಾಲಂ ನಂ. 152 ಮತ್ತು 139ನೇ ಪ್ರಕರಣಗಳನ್ನು ತಿದ್ದುಪಡಿ ಮಾಡುವುದರ ಮೂಲಕ, ತಾಲ್ಲೂಕು ಮತ್ತು ಜಿಲ್ಲಾಪಂಚಾಯತಿ ಅಧ್ಯಕ್ಷರಿಗೆ ಕಾರ್ಯನಿರ್ವಾಹಕ ಹುದ್ದೆಯನ್ನು ಕೊಟ್ಟಿದ್ದೇವೆ. ಅದೇ ರೀತಿ ಕಾಲಂ ನಂ. 159ನೇ ಪ್ರಕರಣವನ್ನು ತಿದ್ದುಪಡಿ ಮಾಡುವ ಮೂಲಕ ಆಯಾಯ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಯ ವ್ಯಾಪ್ತಿಯಲ್ಲಿ ಬರತಕ್ಕ ಲೋಕಸಭಾ ಸದಸ್ಯರು ಮತ್ತು ರಾಜ್ಯ ವಿಧಾನ ಸಭಾ